ರಾಮನಗರದಲ್ಲಿ ಅಂಡರ್‌ಪಾಸ್ ನಿರ್ಮಿಸುವುದು

318 (635) ಶ್ರೀ ರಾಜು ಕೆ. (ರಾಮನಗರ) :– ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಮನಗರ ನಗರದ ಐಜೂರು ವೃತ್ತ ಬಿ.ಎಂ. ರಸ್ತೆಯು ಅತಿ ಜನ ದಟ್ಟಣೆಯ ಪ್ರದೇಶವಾಗಿದ್ದು, ಇದನ್ನು ಜನ ಓಡಾಡಲು ಅಂಡರ್‌ಪಾಸ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗಿನಿಂದ ಕೈಗೆತ್ತಿಕೊಳ್ಳಲಾಗುವುದು (ಮಾಹಿತಿ ನೀಡುವುದು) ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):–

ಅ) ಹೌದು.

ಆ) ಸದರಿ ಕಾಮಗಾರಿಯನ್ನು ನಿರ್ವಹಿಸುವ ಸಂಬಂಧ ರಾಮನಗರ ನಗರಸಭೆಗೆ ನಿಗದಿಯಾಗಿರುವ ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಯೋಜನೆಯ 2010–11ನೇ ಸಾಲಿನ ಅನುದಾನದಲ್ಲಿ ರೂ. 2.5 ಕೋಟಿಗಳನ್ನು ಪ್ರಾಧಿಕಾರಕ್ಕೆ ನೀಡಬೇಕಾಗಿದ್ದು ಉಳಿದ ಮೊತ್ತವನ್ನು ಪ್ರಾಧಿಕಾರವು ಭರಿಸುತ್ತಿದ್ದು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿದ ನಂತರ ಸದರಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು.

ಉದ್ಯಾನವನದ ಅಭಿವೃದ್ಧಿ

320 (471) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) :– ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನಕ್ಕೆ ಪ್ರತಿದಿನ ಬೆಳಗಿನ ವಾಯು ವಿಹಾರ ಸೇರಿ ಬೇಟಿ ನೀಡುತ್ತಿರುವ ನಾಗರೀಕರ ಸರಾಸರಿ ಸಂಖ್ಯೆ ಎಷ್ಟು